ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 468 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | **10.07.2023** |
| **ಪ್ರಶ್ನೆ** | **ಉತ್ತರ** |
| (ಅ) ಹೊಸ ರಾಷ್ಟ್ರೀಯ ಶಿಕ್ಷಣ ನೀತಿ-2020 ರಲ್ಲಿ ಹಾಗೂ ಅನುಷ್ಠಾನದಲ್ಲಿರುವ ತೊಡಕುಗಳೇನು; (ಪೂರ್ಣ ವಿವರಗಳೊಡನೆ ಮಾಹಿತಿ ನೀಡುವುದು) | 1. ಸಾಮಾಜಿಕ ಮತ್ತು ಔದ್ಯಮಿಕ ಕ್ಷೇತ್ರಗಳಲ್ಲಾಗುತ್ತಿರುವ ಬದಲಾವಣೆಗಳಿಗೆ ಅನ್ವಯಿಸುವಂತೆ ಬೋಧಕರಲ್ಲಿ ಕೌಶಲ್ಯಾಧಾರಿತ ಶಿಕ್ಷಣಕ್ಕೆ ಅಗತ್ಯವಾದ ಮೂಲಭೂತ ಸೌಕರ್ಯ ಹಾಗೂ ಶಿಕ್ಷಣಶಾಸ್ತ್ರ, ಹಾಗೂ ತಂತ್ರಜ್ಞಾನದ ಅರಿವು ಹಾಗೂ ಕೌಶಲ್ಯಗಳ ಕೊರತೆ.<br>2. ಬೋಧಕ, ಬೋಧಕೇತರ ಹಾಗೂ ವಿದ್ಯಾರ್ಥಿಗಳ ಸಮೂಹಗಳಲ್ಲಿ ಹೊಸ ಶಿಕ್ಷಣ ನೀತಿಯಿಂದ ಲಭ್ಯವಾಗುತ್ತಿರುವ ಹೊಸ ಅವಕಾಶಗಳ ಅರಿವಿನ ಕೊರತೆ.<br>3. ಕೇಂದ್ರಿಯ ನಿಯಂತ್ರಣ ಮಂಡಳಿಗಳಾದ UGC, AICTE ಗಳಿಂದ ಕಾಲಕಾಲಕ್ಕೆ ಹೊರಡಿಸಲಾಗುತ್ತಿರುವ ಮಾರ್ಗಸೂಚಿ ಮತ್ತು ರೆಗ್ಯೂಲೇಷನ್ಸ್ ಗಳ ಅರಿವು ಹಾಗೂ ಅನ್ವಯ ಮಾಡಿಕೊಳ್ಳಬೇಕಾದ ಸಿದ್ಧತೆಗಳ ಹಂತದಲ್ಲಿ ಎದುರಾಗುವ ಸಮಸ್ಯೆಗಳು. |
| (ಆ) ಸದರಿ ತೊಡಕುಗಳ ನಿವಾರಣೆಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು; | 1. ಇದೊಂದು ನಿರಂತರ ಪ್ರಕ್ರಿಯೆಯಾಗಿದ್ದು, ಈ ಯೋಜನೆಗೆ ರಾಜ್ಯ ಸರ್ಕಾರವು ಸತತವಾಗಿ ಹಣವನ್ನು ವ್ಯಯಿಸುತ್ತಿದೆ. ರೂಸ (RUSA) 1.0 ಹಾಗೂ 2.0 ಅಡಿಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜಂಟಿ ಸಹಭಾಗಿತ್ವದಲ್ಲಿ ಹಾಗೂ PM-USHA ಯೋಜನೆ ಮುಖಾಂತರವಾಗಿ ಮುಂದುವರೆಸಲಾಗುತ್ತಿದೆ.<br>2. ವಿಶ್ವವಿದ್ಯಾಲಯಗಳಲ್ಲಿ ಮತ್ತು ಕಾಲೇಜುಗಳಲ್ಲಿ (ರಾಜ್ಯ ಸರ್ಕಾರ/ಖಾಸಗಿ) ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ತರುವ ನಿಟ್ಟಿನಲ್ಲಿ ಹಲವಾರು ಸೆಮಿನಾರ್‌ಗಳನ್ನು ನಡೆಸಿ ಬೋಧಕ ವರ್ಗಕ್ಕೆ ಸಾಕಷ್ಟು ಮಾಹಿತಿ ಮತ್ತು ತಿಳುವಳಿಕ ನೀಡಲಾಗಿದೆ. ಇದಲ್ಲದೆ, Karnataka Higher Education Academy, Dharwada ಇವರಿಂದ ಈಗ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ Board of Studies (BOS) ಮತ್ತು Board of Examiners (BOE) ಸದಸ್ಯರುಗಳಿಗೆ ಮತ್ತು ಬೋಧಕರಿಗೆ ಹಂತ ಹಂತವಾಗಿ ತರಬೇತಿ ನೀಡಲು ವ್ಯವಸ್ಥೆ ಮಾಡಲಾಗಿದೆ ಮತ್ತು ಹಲವು ವಿಶ್ವವಿದ್ಯಾಲಯಗಳಲ್ಲಿರುವ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳ (ಹಿಂದಿನ Academic Staff College) ಗಳ ಮುಖಾಂತರ ತರಬೇತಿ ನೀಡಲು ಕ್ರಮವಹಿಸಲಾಗಿದೆ.<br>3. KSHEC, KSHEA, ವಿಶ್ವವಿದ್ಯಾಲಯಗಳು ಹಾಗೂ ಕಾಲೇಜು ಮಟ್ಟದಲ್ಲಿ Seminars/Workshops ಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ. |
| (ಇ) ಯಾವ ಕಾಲಮಿತಿಯಲ್ಲಿ ಸದರಿ ತೊಡಕುಗಳನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುವುದು? | ಇದು ನಿರಂತರವಾಗಿ ನಡೆಯುತ್ತಿರುವ ಪ್ರಕ್ರಿಯೆಯಾಗಿದ್ದು, ಕಾಲಕಾಲಕ್ಕೆ ಅವಶ್ಯಕತೆಗಳನ್ನು ಪೂರೈಸಿಕೊಂಡು ಉದ್ಭವಿಸುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗುವುದು. |

**ಸಂಖ್ಯೆ: ಇಡಿ 114 ಯುಎನ್‌ಇ 2023**

(ಡಾ ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು.